ಜಯಕಿರಣ ದಿನಪತ್ರಿಕೆ

13.10.2024

# ಎನ್‌ಐಟಿಕೆಯಲ್ಲಿ ಎಸ್‌ಎಐಇಂಡಿಯಾ ಕರಾವಳಿ ಕರ್ನಾಟಕ ವಿಭಾಗದ ಉದ್ಘಾಟನೆ



(ಜಯಕಿರಣ ವರದಿ)

ಸುರತ್ಕಲ್: ಕರ್ನಾಟಕದ ಕರಾವಳಿ ಪ್ರದೇಶದ ಎಂಜಿನಿಯರಿಂಗ್ ಸಮುದಾಯಕ್ಕೆ ಮಹತ್ವದ ಉತ್ತೇಜನ ನೀಡುವ ನಿಟ್ಟಿನಲ್ಲಿ, ಎಸ್‌ಎಇ ಇಂಡಿಯಾ (ಸೊಸೈಟಿ ಆಫ್ ಆಟೋ ವೋಟಿವ್ ಎಂಜಿನಿಯರ್ಸ್ ಇಂಡಿಯಾ) ಕರಾವಳಿ ಕರ್ನಾಟಕ ವಿಭಾಗವನ್ನು ಅಕ್ಟೋಬರ್ 5, 2024 ರಂದು ಸುರತ್ಕಲ್‌ನ ಪ್ರತಿಷ್ಠಿತ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ (ಎನ್‌ಐಟಿಕೆ)ನಲ್ಲಿ ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್‌ಎಇಇಂಡಿಯಾ ಬೆಂಗಳೂರು ವಿಭಾಗದ ಅಧ್ಯಕ್ಷ ಗಿರೀಶ್ ರಾಮಸ್ವಾಮಿ, ಕಾರ್ಯದರ್ಶಿ ಟಿಟೊ ಕಿಶನ್, ಉಪಾಧ್ಯಕ್ಷ ರಾಕೇಶ್ ಬಿದ್ರೆ, ಎನ್‌ಐಟಿಕೆ ಸುರತ್ಕಲ್‌ನ ಡೀನ್ (ವಿದ್ಯಾರ್ಥಿ ಕಲ್ಯಾಣ) ಡಾ.ಎ.ಸಿ.ಹೆಗ್ಡೆ, ಎಸ್‌ಎಇ ಎನ್‌ಐಟಿಕೆಯ ಬೋಧಕ ಸಲಹೆಗಾರ ಡಾ.ಬಿ.ದಸ್ತಗಿರಿ ರೆಡ್ಡಿ ಉಪಸ್ಥಿತರಿದ್ದರು.

ಈ ಹೊಸ ವಿಭಾಗವು ರಾಜ್ಯದ ಕರಾವಳಿ ಪ್ರದೇಶದಾದ್ಯಂತ ಆಟೋಮೋಟಿವ್ ಮತ್ತು ಏರೋಸ್ಪೇಸ್ ಕ್ಷೇತ್ರಗಳಲ್ಲಿ ನಾವೀನ್ಯತೆ, ಸಹಯೋಗ ಮತ್ತು ತಾಂತ್ರಿಕ ಅಭಿವೃದ್ಧಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದ್ದು, ಸೈಇಂಡಿಯಾ ಕರಾವಳಿ ಕರ್ನಾಟಕ ವಿಭಾಗವನ್ನು ಸ್ಥಾಪಿಸುವುದು ಆಟೋಮೋಟಿವ್ ಮತ್ತು ಏರೋಸ್ಪೇಸ್ ಕ್ಷೇತ್ರಗಳಲ್ಲಿ, ವಿಶೇಷವಾಗಿ ವೇಗವಾಗಿ ಬೆಳೆಯುತ್ತಿರುವ ಕರ್ನಾಟಕದ ಕರಾವಳಿ ಪ್ರದೇಶದಲ್ಲಿ ಭವಿಷ್ಯದ ಸವಾಲುಗಳನ್ನು ಎದುರಿಸಲು ಅಗತ್ಯವಾದ ತಾಂತ್ರಿಕ ಕೌಶಲ್ಯ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವಲ್ಲಿ ಒಂದು ಮೈಲಿಗಲ್ಲಾಗಿದೆ.

ಎನ್‌ಐಟಿಕೆ ಸುರತ್ಕಲ್‌ನ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಸುಧಾಕರ್ ಸಿ.ಜಂಬಗಿ ಅವರನ್ನು ವಿಭಾಗದ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಅವರ ನಾಯಕತ್ವದಲ್ಲಿ ಶ್ರೀನಿಧಿ ಮೋಟಾರ್ ವರ್ಕ್ಸ್ ನ ಮಾಲೀಕ ಕುಮಾರ್ ಚಂದ್ರ ಅವರು ಉಪಾಧ್ಯಕ್ಷರಾಗಿ, ಎಂಐಟಿ–ಮಾಹೆ ಮಣಿಪಾಲದ ಏರೋನಾಟಿಕಲ್ ಮತ್ತು ಆಟೋಮೊಬೈಲ್ ಎಂಜಿನಿಯರಿಂಗ್ ವಿಭಾಗದ ಹಿರಿಯ ಸಹಾಯಕ ಪ್ರಾಧ್ಯಾಪಕ (ಏರೋಸ್ಪೇಸ್) ಡಾ.ಬಲ್ಬೀರ್ ಸಿಂಗ್ ಅವರನ್ನು ಕಾರ್ಯದರ್ಶಿಯಾಗಿ ನೇಮಿಸಲಾಗಿದೆ.

ಎನ್‌ಎಂಎಎಂಐಟಿಯ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಮಾಜಿ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಮತ್ತು ಡೆಂಟ್ರಾನಿಕ್ಸ್ ಪ್ರೈವೇಟ್ ಲಿಮಿಟೆಡ್ನ ನಿರ್ದೇಶಕ ಡಾ.ಶಶಿಕಾಂತ ಕಾರಿಂಕಾ ಅವರನ್ನು ವಿಭಾಗದ ಸಲಹೆಗಾರರಾಗಿ ನೇಮಿಸಲಾಗಿದೆ. ಡಾ. ಕರಿಂಕಾ ಅವರು ಇಂಡಿಯನ್ ವೆಲ್ಡಿಂಗ್ ಸೊಸೈಟಿಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ.